ಅಂಗನವಾಡಿ ಕಾರ್ಯಕರ್ತೆಯರನ್ನು ಮುಖ್ಯಸೇವಿಕ ಮೇಲ್ವಿಚಾರಕಿ ಮತ್ತು ಶಿಕ್ಷಕರ ಹುದ್ದೆಗೆ ನೇಮಕ.

3770 - ಶ್ರೀ ಹೆಚ್.ಎಂ. ರೇವಣ್ಣ (ಮಾಗಡಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಅಂಗನವಾಡಿ ಕಾರ್ಯಕರ್ತೆಯರನ್ನು ಮುಖ್ಯಸೇವಿಕೆಯರ, ಗ್ರಾಮಸೇವಕೆಯರ ಮತ್ತು ಪ್ರಾಥಮಿಕ ಶಿಕ್ಷಕಿಯರ ಹುದ್ದೆಗೆ ನೇರ ನೇಮಕಾತಿ ಮಾಡುವುದರಲ್ಲಿ ಸರ್ಕಾರಕ್ಕೆ ಇರುವ ತೊಂದರೆಯೇನು?

ಆ) ಮಹಾರಾಷ್ಟ್ರ ಸರ್ಕಾರದಲ್ಲಿ ಇದರ ಬಗ್ಗೆ ಆದೇಶ ಇರುವುದರಿಂದ ನಮ್ಮ ಸರ್ಕಾರ ಇದನ್ನು ಅನುಸರಿಸಲು ಇರುವ ತೊಂದರೆಯೇನು?

ಇ) 17 ವರ್ಷಗಳಿಂದ ಅನುಭವ ಪಡೆದ ಅಂಗನವಾಡಿ ಕಾರ್ಯಕರ್ತೆಯವರಿಗೆ ಸಹಾಯ ಮಾಡಿದಂತೆ ಆಗುವುದಿಲ್ಲವೆ?

ಶ್ರೀ ಬಿ. ಶಿವಣ್ಣ (ಸಮಾಜ ಕಲ್ಯಾಣ ಸಚಿವರು):

ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನ್ಯಂದ ಮತ್ತು ನೇಮಕಾತಿ ನಿಯಮಗಳಲ್ಲಿ ಮುಖ್ಯಸೇವಿಕಾ ಮೇಲ್ವಿಚಾರಕಿಯರಿಗೆ ಶೇಕಡ 75ರಷ್ಟು ಹುದ್ದೆಗಳನ್ನು ನೇರ ನೇಮಕಾತಿಗಳಿಗಾಗಿ ನಿಗದಿ ಪಡಿಸಲಾಗಿದೆ. ನೇರ ನೇಮಕಾತಿಗಳಿಗಾಗಿ ಎಸ್.ಎಸ್.ಎಲ್.ಸಿ. ಪಾಸಾದ 10 ವರ್ಷ ಅಂಗನವಾಡಿ ಕಾರ್ಯಕರ್ತೆಯರಾಗಿ ಸೇವೆಸಲ್ಲಿಸಿದವರು ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. 10 ವರ್ಷ ಅಂಗನವಾಡಿ ಕಾರ್ಯಕರ್ತೆಯರೆಂದು ಸೇವೆ ಸಲ್ಲಿಸಿದವರಿಗೆ ನೇಮಕಾತಿಯಲ್ಲಿ ಆದ್ಯತೆ ಕೊಡಲಾಗುತ್ತದೆ. ಅಂಗನವಾಡಿ ಕಾರ್ಯಕರ್ತೆಯರೆಂದು ಸೇವೆ ಸಲ್ಲಿಸಿರುವ ಗರಿಷ್ಟ 15 ವರ್ಷ ಸೇವೆ ಮತ್ತು ವಯೋಮಿತಿ 45 ವರ್ಷಗಳವರೆಗೆ ವ್ಯಂದ ಮತ್ತು ನೇಮಕಾತಿ ನಿಯಮಗಳ ಪ್ರಕಾರ ವಯೋಮಿತಿಯನ್ನು ಸಡಿಲಗೊಳಿಸಲಾಗಿದೆ. ಪ್ರಾಥಮಿಕ ಶಾಲಾ ಶಿಕ್ಷಕರ ಬಗ್ಗೆ ಶಿಕ್ಷಣ ಇಲಾಖೆಯೊಡನೆ ಸಮಾಲೋಚಿಸಲಾಗುತ್ತಿದೆ.

ಆ) ಸರ್ಕಾರಕ್ಕೆ ಮಹಾರಾಷ್ಟ್ರ ಸರ್ಕಾರದ ಆದೇಶದ ಬಗ್ಗೆ ಮಾಹಿತಿ ಇಲ್ಲ.

ಇ) ಇದು ಅನ್ವಯಿಸುವುದಿಲ್ಲ.

ಕಟುಕ ಜನಾಂಗದವರ ಸಂಖ್ಯೆ.

3771 - ಶ್ರಿಯುತರಾದ ಚೌಡಾರೆಡ್ಡಿ (ಚಿಂತಾಮಣಿ), ಬಿ. ಸ್ವಾಮಿರಾವ್ (ಹೊಸನಗರ), ನಾರಾಯಣರಾವ್‌ಮನಹಳ್ಳಿ (ಬೀದರ್) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯದಲ್ಲಿ ಕಟಿಕರು ಅಥವಾ ಕಟುಕರ ಜನಸಂಖ್ಯೆ ಎಷ್ಟು?

ಆ) ಇವರು ಸಾಮಾಜಿಕವಾಗಿ ಆರ್ಥಿಕವಾಗಿ ಶೈಕ್ಷಣಿಕವಾಗಿ ರಾಜಕೀಯವಾಗಿ ಅತ್ಯಂತ ಹಿಂದುಳಿದಿದ್ದಾರೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಈ ಜನಾಂಗದವರು ತಮ್ಮನ್ನು ಪರಿಶಿಷ್ಟ ಜಾತಿಗೆ ಸೇರಿಸುವಂತೆ ಹೋರಾಟ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ ಆ ಬಗ್ಗೆ ಸರ್ಕಾರದ ಧೋರಣೆ ಏನು?

ಶ್ರೀ ಬಿ. ಶಿವಣ್ಣ (ಸಮಾಜ ಕಲ್ಯಾಣ ಸಚಿವರು):

ಅ) 2ನೇ ಹಿಂದುಳಿದ ವರ್ಗಗಳ ಆಯೋಗದ ವರದಿ ಪ್ರಕಾರ ಕರ್ನಾಟಕ ರಾಜ್ಯದಲ್ಲಿ ಕಾಟಿಕ್/ಕಟುಕರ ಜನ ಸಂಖ್ಯೆ 60,586 ಎಂದು ನಮೂದಿಸಲಾಗಿದೆ.